ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ,
ಶ್ರೀರಂಗಪಟ್ಟಣ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ **: 59/2020**

ಚಾ.ಸಾ. **:- 05**
ಪ್ರಾ.ಸಾ. **:- 05**

| | | |
|---|---|---|
| ಹೆಸರು | : | ಸುರೇಶ |
| ತಂದೆಯ ಹೆಸರು | : | ರವಿನಾಯಕ |
| ವಯಸ್ಸು | : | 27 ವರ್ಷ |
| ಉದ್ಯೋಗ | : | ಖಾಸಗೀ ಕೆಲಸ |
| ವಾಸಸ್ಥಳ | : | ಮೈಸೂರು. |

ಪ್ರಮಾಣೀಕರಿಸಲಾದ ದಿನಾಂಕಃ**- 19.01.2026.**

<u>ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :</u>

ಈಗ ನೋಡುತ್ತಿರುವ ದಾಖಲೆಯಲ್ಲಿರುವ ಸಹಿ ನನ್ನದು. ಸಾಕ್ಷಿಯ ಸಹಿ ಇರುವ ದಾಖಲೆಯು ಮಹಜರ್ ಆಗಿದ್ದು, ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ರಸ್ತೆ ಅಪಘಾತಕ್ಕೆ ಸಂಬಂಧಿಸಿದಂತೆ ಸದರಿ ಮಹಜರ್ ಗೆ ನಾನು ಸಹಿ ಮಾಡಿರುತ್ತೇನೆ. ಸದರಿ ಸಹಿಯನ್ನು ನಾನು ಅಪಘಾತ ಸ್ಥಳದಲ್ಲಿ ಮಾಡಿರುತ್ತೇನೆ. ನಿಪಿ-2 ಮತ್ತು 3 ರಲ್ಲಿ ಅಪಘಾತ ಸ್ಥಳ ಕಾಣಿಸುತ್ತದೆ ಹಾಗೂ ನನ್ನ ಭಾವಚಿತ್ರ ಇರುತ್ತದೆ. ಅಪಘಾತದ ಸಮಯದಲ್ಲಿ ಪೊಲೀಸರು 2 ವಾಹನಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ.

<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :</u>

ಅಪಘಾತದ ಬಗ್ಗೆ ನನಗೆ ಪೊಲೀಸರು ಹೇಳಿರುವುದಿಲ್ಲ, ಬೇರೆಯವರು ಹೇಳಿರುತ್ತಾರೆ. ಆ ಸಮಯದಲ್ಲಿ ನಾನು ಸ್ಥಳಕ್ಕೆ ಹೋದಾಗ ಚಾ.ಸಾ-11 ಸಹ ಇದ್ದರು, ಬೇರೆಯವರು ಇರಲಿಲ್ಲ. ವಾಹನಗಳ ನೋಂದಣಿ ಸಂಖ್ಯೆ ಹೇಳಲಾಗುವುದಿಲ್ಲ. ನನ್ನ ಮುಂದೆ ಯಾವುದೇ ಬರವಣಿಗೆ ಮಾಡಿಲ್ಲ ಎಂದರೆ ಸರಿ. ನನ್ನ ಸಮಕ್ಷಮ ಯಾವುದೇ ವಾಹನಗಳನ್ನು ಅಮಾನತ್ತುಪಡಿಸಿಕೊಳ್ಳದೇ ಇದ್ದರೂ ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆ :- ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

ಪ್ರಧಾನ ಹಿರಿಯ ಸಿಜೆ ಮತ್ತು
ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.

**ಸಾಕ್ಷಿದಾರರ ಸಹಿ.**